ದಿ: ೧೪.೦೯.೨೦೨೧ ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿ ಮುಖ್ಯ ವಿಚಾರಣೆಗೆ ಒಳಪಡಿಸಲಾಯಿತು.

ಮುಖ್ಯ ವಿಚಾರಣೆ :ಪ್ರತಿವಾದಿ ಪರವಾಗಿ ಶ್ರೀಮತಿ ಬಿ.ಆರ್.ಎಸ್. ವಕೀಲರಿಂದ.

ಇಂದು ನಾನು ಮಾನ್ಯ ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣೆ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲ ಅಂಶಗಳು ಸತ್ಯವಾಗಿರುತ್ತವೆ ಮತ್ತು ಸದ್ರಿ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ನಾನು ಮಾನ್ಯ ನ್ಯಾಯಾಲಯಕ್ಕೆ ಈ ಪ್ರಕರಣದ ೬ನೇ ಪ್ರತಿವಾದಿ ನನ್ನ ತಂದೆ ನನಗೆ ಬರೆದುಕೊಟ್ಟಿರುವ ಅಧೀಕಾರ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ.೧೯ ಎಂದು, ಗುರ್ತಿಸಲಾಯಿತು.

ಆದ್ದರಿಂದ ಪ್ರತಿವಾದ ಪತ್ರದಲ್ಲಿ ತಿಳಿಸಿದಂತೆ ಪ್ರಾರ್ಥನೆ ಪುರಸ್ಕರಿಸಬೇಕೆಂದು ವಿನಂತಿ ಇರುತ್ತದೆ.

( ಈ ಹಂತದಲ್ಲಿ ವಾದಿ ಪರವಾಗಿ ಶ್ರೀ ಜಿ.ಕೆ ವಕೀಲರು ಸಾಕ್ಷಿಯ ಪಾಟೀ ಸವಾಲಿಗೆ ಸಮಯ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

**ಓ.ಹೇ.ಕೇ.ಸ.ಇದೆ**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ**
**ಹೊಸಕೋಟೆ.**